ಇ) ವಿಶ್ವ ಬ್ಯಾಂಕ್ ನೆರವಿನ ಕರ್ನಾಟಕ ಆರೋಗ್ಯ ವ್ಯವಸ್ಥೆಗಳ ಅಭಿವೃದ್ಧಿ ಯೋಜನೆಯಡಿ ಕೈಗೊಂಡಿದ್ದ ಮಂಡ್ಯ ಜಿಲ್ಲಾ ಆಸ್ಪತ್ರೆಯ ನವೀಕರಣ ಮತ್ತು ಅಭಿವೃದ್ಧಿ ಕಾಮಗಾರಿಯು ಪೂರ್ಣಗೊಂಡಿವೆ. ಹಾಗೂ ಈ ಆಸ್ಪತ್ರೆ ಕಟ್ಟಡವನ್ನು 2000ದ ಜೂನ್ ತಿಂಗಳಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ಹಸ್ತಾಂತರಿಸಲಾಗಿದೆ.

ಇದೇ ಆಸ್ಪತ್ರೆಯಲ್ಲಿ ಈ ಹಿಂದೆ ಲೋಕೋಪಯೋಗಿ ಇಲಾಖೆಯಿಂದ ಪ್ರಾರಂಭಿಸಿ ಅಪೂರ್ಣಗೊಂಡಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಹಾಗೂ ಅಗತ್ಯವಿರುವ ಇತರೆ ಹೆಚ್ಚುವರಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ ಆಕುಕ 335 ಆಯೋಸಂ 2001, ದಿನಾಂಕ 11.1.2002ರಲ್ಲಿ ಒಟ್ಟು ರೂ. 200.00 ಲಕ್ಷಗಳಿಗೆ ಮಂಜೂರಾತಿ ನೀಡಲಾಗಿದೆ. ಈ ಆದೇಶದನ್ವಯ ಕಾಮಗಾರಿ ಕೈಗೊಳ್ಳಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.

ಈ) ಸರ್ಕಾರದ ದಿನಾಂಕ 11.1.2002 ಆದೇಶದಂತೆ ಉಳಿದ ಕಾಮಗಾರಿಗಳನ್ನು ಪೂರ್ಣಗೊಳಿಸಲು ಕ್ರಮ ತೆಗೆದುಕೊಳ್ಳಲಾಗುವುದು.

ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಟ್ರಾಮಾ ಸೆಂಟರ್ ಪ್ರಾರಂಭಿಸುವುದು

1168 (1604) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ನಗರವು ಬೆಂಗಳೂರು-ಮೈಸೂರು ನಡುವಿನ ರಾಜ್ಯ ಹೆದ್ದಾರಿಯಲ್ಲಿದ್ದು, ಈ ರಸ್ತೆಯಲ್ಲಿನ ಅಪಘಾತದ ಗಾಯಾಳುಗಳಿಗೆ ತುರ್ತು ಚಿಕಿತ್ಸೆ ನೀಡಲು ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಒಂದು 'ಟ್ರಾಮಾ ಸೆಂಟರ್' ಪ್ರಾರಂಭಿಸುವ ಅವಶ್ಯಕತೆಯನ್ನು ಸರ್ಕಾರವು ಮನಗೊಂಡಿದೆಯೇ?

ಆ) ಹಾಗಿದ್ದಲ್ಲಿ ಟ್ರಾಮಾ ಸೆಂಟರ್ (Trauma Centre) ಪ್ರಾರಂಭಿಸುವ ಬಗೆಗೆ ಇಲಾಖೆ ಸಿದ್ಧತೆಯನ್ನು ಮಾಡಿಕೊಂಡಿದೆಯೇ?

ಇ) ಈ ಟ್ರಾಮಾ ಸೆಂಟರ್ (Trauma Centre) ಅನ್ನು ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು

ಆ) ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ಟ್ರಾಮಾ ಕೇಂದ್ರವು ಕಾರ್ಯಾಚರಣೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

ಭಾರತೀಯ ವೈದ್ಯಪದ್ಧತಿ ಮತ್ತು ಹೋಮಿಯೋಪತಿ ಆಸ್ಪತ್ರೆಗಳಲ್ಲಿ ಸಿಬ್ಬಂದಿ ಕೊರತೆ

1169 (1606) ಶ್ರೀ ಆತ್ಮಾನಂದ ಎಂ.ಎಸ್. (ಮಂಡ್ಯ) : ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಪ್ರಸ್ತುತ ಭಾರತೀಯ ವೈದ್ಯ ಪದ್ಧತಿ ಹಾಗೂ ಹೋಮಿಯೋಪತಿ ಪದ್ಧತಿಯ ಆಸ್ಪತ್ರೆಗಳೆಷ್ಟು;

ಆ) ಈ ಆಸ್ಪತ್ರೆಗಳಿಗೆ ಮಂಜೂರಾಗಿರುವ ಸಿಬ್ಬಂದಿಯ ವಿವರಗಳೇನು;